ಅ) ಕೋಲಾರದಲ್ಲಿ ವಿದ್ಯುತ್ ಉತ್ಪಾದನೆ ಮಾಡಲು ಬಂದು 'ಡೀಸಲ್' ವಿದ್ಯುತ್ ಘಟಕವನ್ನು ಸ್ಥಾಪಿಸುವ ಕಾರ್ಯಕ್ರಮವೇನಾದರು ಸರ್ಕಾರದ ಮುಂದೆ ಇದೆಯೇ, ಹಾಗಿದ್ದಲ್ಲಿ ಅದರ ವಿವರಗಳನ್ನು ಒದಗಿಸುವುದು.

ಆ) ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಜೆ.ಹೆಚ್. ಪಟೇಲ್ (ಉಪ ಮುಖ್ಯಮಂತ್ರಿಗಳು) :

ಅ) ಕರ್ನಾಟಕ ಸರ್ಕಾರವು ತನ್ನ ಆದೇಶ ನಂ. ಡಿಇ 154 ಪಿಪಿಸಿ 94 (1) ದಿನಾಂಕ 1-9-94ರ ಮೂಲಕ ಮೆ : ಹೆಚ್.ಎಮ್.ಜಿ. ಪವರ್ ಲಿಮಿಟೆಡ್, ಬೆಂಗಳೂರು ಇವರಿಗೆ ಕೋಲಾರದಲ್ಲಿ 20 ಮೆ.ವ್ಯಾ. ಸಾಮರ್ಥ್ಯದ ಡೀಸಲ್ ಆಧಾರಿತ ವಿದ್ಯುತ್ ಉತ್ಪಾದನಾ ಕೇಂದ್ರವನ್ನು ಸ್ಥಾಪಿಸಲು ಅನುಮತಿ ನೀಡಿದೆ. ಇದಲ್ಲದೆ ಬೇರೆ ಡೀಸಲ್ ವಿದ್ಯುತ್ ಘಟಕವನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ.

ಆ) 'ಅ' ಪ್ರಶ್ನೆಗೆ ನೀಡಿದ ಉತ್ತರದ ಮೇರೆಗೆ ಉದ್ಭವಿಸುವುದಿಲ್ಲ.

ಕೋಲಾರ ಜಿಲ್ಲೆಯ ಅವನಿ ಮತ್ತು ಲಕ್ಷ್ಮಣತೀರ್ಥ ಅಂತರಗಂಗೆ, ಗುಮ್ಮನಾಯಕನಪಾಳ್ಯ ಪ್ರದೇಶಗಳನ್ನು ಪ್ರವಾಸೋದ್ಯಮ ಕೇಂದ್ರಗಳಾಗಿ ಮಾಡುವುದು.

241 - ಶ್ರೀ ಬಿ.ವಿ. ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯ ಅವನಿ ಮತ್ತು ಲಕ್ಷ್ಮಣತೀರ್ಥ ಅಂತರಗಂಗೆ, ಗುಮ್ಮನಾಯಕನ ಪಾಳ್ಯ ಪ್ರದೇಶಗಳು ಚಾರಿತ್ರಿಕೆ ಸ್ಥಳಗಳಾಗಿರುವುದರಿಂದ ಅವುಗಳನ್ನು ಜಿಲ್ಲೆಯ ಪ್ರಮುಖ ಪ್ರವಾಸೋದ್ಯಮ ಕೇಂದ್ರಗಳನ್ನಾಗಿ ಮಾಡಲು ಸರ್ಕಾರದವರು ಪರಿಶೀಲಿಸುವರೆ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಳ್ಳಲಿರುವ ಕಾರ್ಯಗಳೇನು?

ಶ್ರೀ ಜೆ.ಹೆಚ್. ಪಟೇಲ್ (ಉಪ ಮುಖ್ಯಮಂತ್ರಿಗಳು) :

ಅ) ಹೌದು

ಆ) ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಬೆಳೆಸುವ ಉದ್ದೇಶದಿಂದ, ರಾಜ್ಯ ಪ್ರವಾಸೋದ್ಯಮ ನೀತಿಯಲ್ಲಿ ಕೋಲಾರ ಜಿಲ್ಲೆಯ ಲಕ್ಷ್ಮಣತೀರ್ಥ ಅಂತರಗಂಗೆ ಗುಮ್ಮನಾಯಕನಪಾಳ್ಯವನ್ನು ಪ್ರಾಮುಖ್ಯವಾದ ಪ್ರವಾಸಿ ಸ್ಥಳಗಳಲ್ಲಿ 'ಬಿ' ಗುಂಪಿನಡಿ ಸೇರಿಸಲಾಗಿದೆ. ಇಲ್ಲಿ ಪ್ರವಾಸಿ ಸೌಲಭ್ಯಗಳನ್ನು ನಿರ್ಮಿಸಲು ಮುಂದೆ ಬರುವ ಖಾಸಗಿ ಉದ್ಯಮಿಗಳಿಗೆ ಪ್ರವಾಸೋದ್ಯಮ ಕಾರ್ಯ ನೀತಿಯಂತೆ ಸಬ್ಸಿಡಿ, ಮಾರಾಟ ತೆರಿಗೆ ವಿನಾಯ್ತಿ ಕೈಗಾರಿಕಾ ದರದಲ್ಲಿ ವಿದ್ಯುತ್ ಸರಬರಾಜು ಮುಂತಾದ ಸೌಲಭ್ಯಗಳನ್ನು ನೀಡಲಾಗುವುದು.

ಹುಬ್ಬಳ್ಳಿ - ಧಾರವಾಡ ಮಹಾನಗರದ ನಡುವೆ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ

180 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ) : ಮಾನ್ಯ ಲೋಕೋಪಯೋಗಿ ಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ - ಧಾರವಾಡ ಮಹಾನಗರದ ನಡುವೆ ಹಾಯ್ದು ಹೋಗಿರುವ ರಾಷ್ಟ್ರೀಯ ಹೆದ್ದಾರಿ ರಸ್ತೆ ನಿರ್ಮಾಣ ಕೆಲಸ ಈವರೆಗೆ ಎಷ್ಟು ಕಿ.ಮೀ. ಮುಗಿದಿದೆ ಹಾಗೂ ಆ ಬಗ್ಗೆ ಖರ್ಚು ಮಾಡಲಾದ ಹಣವೆಷ್ಟು?

ಶ್ರೀ ಶಿವನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು)